**Tuesday 13th August 2024, Page No. 04**

**Semiconductor training workshop started at RV College**

ಕನ್ನಡಪ್ರಭ

# ಆರ್‌ವಿ ಕಾಲೇಜಲ್ಲಿ ಸೆಮಿಕಂಡಕ್ಟರ್ ತರಬೇತಿ ಕಾರ್ಯಾಗಾರ ಆರಂಭ

## 12 ದಿನಗಳ ತರಬೇತಿ | ವಿದ್ಯಾರ್ಥಿಗಳಿಗೂ ಮುಕ್ತ: ರವೀಶ್



ರಾಷ್ಟ್ರೀಯ ವಿದ್ಯಾಲಯ ತಾಂತ್ರಿಕ ಮಹಾವಿದ್ಯಾಲಯದಲ್ಲಿ ಅಧ್ಯಾಪಕರು, ಸಿಬ್ಬಂದಿಗೆ 12 ದಿನಗಳ ತರಬೇತಿ ಕಾರ್ಯಾಗಾರಕ್ಕೆ ಸೋಮವಾರ ಚಾಲನೆ ನೀಡಲಾಯಿತು.

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ಕೆಂಗೇರಿ ಬಳಿಯ ರಾಷ್ಟ್ರೀಯ ವಿದ್ಯಾಲಯ ತಾಂತ್ರಿಕ ಮಹಾವಿದ್ಯಾಲಯದಲ್ಲಿ ಅಧ್ಯಾಪಕರು, ಸಿಬ್ಬಂದಿಗೆ 12 ದಿನಗಳ ತರಬೇತಿ ಕಾರ್ಯಾಗಾರಕ್ಕೆ ಸೋಮವಾರ ಚಾಲನೆ ನೀಡಲಾಯಿತು.

ಕಾಲೇಜಿನ ವಿದ್ಯುನ್ಮಾನ ಮತ್ತು ಸಂವಹನ ತಂತ್ರಶಾಸ್ತ್ರ ವಿಭಾಗದ ಪ್ರಾಧ್ಯಾಪಕ ಡಾ। ಎಚ್.ವಿ.ರವೀಶ್ ಆರಾಧ್ಯ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿ, ಎಐಸಿಟಿಇಯ ಅಂಗಸಂಸ್ಥೆ ಎಟಿಎಎಲ್ ಪ್ರಾಯೋಜಕತ್ವದಲ್ಲಿ ಆಯೋಜಿಸಿರುವ ಈ ಕಾರ್ಯಾಗಾರವು ಆ.24ರವರೆಗೆ ನಡೆಯಲಿದೆ. ‘ಭವಿಷ್ಯದ ಸೆಮಿಕಂಡಕ್ಟರ್ ತಂತ್ರಜ್ಞಾನಗಳಿಗೆ ಮುಂದಿನ ಪೀಳಿಗೆಯ ಸಿಸ್ಟಮ್ ಆನ್ ಚಿಪ್ ವಿನ್ಯಾಸ’ ಎಂಬ ವಿಷಯದ ಬಗ್ಗೆ ವಿಸ್ತೃತ ಮಾಹಿತಿ ಬಗ್ಗೆ ರಾಜ್ಯ ಮತ್ತು ರಾಷ್ಟ್ರಮಟ್ಟದ ಸಂಪನ್ಮೂಲ ವ್ಯಕ್ತಿಗಳು, ತಂತ್ರಜ್ಞರು, ವಿಜ್ಞಾನಿಗಳು ಬೆಳಕು ಚೆಲ್ಲಲಿದ್ದಾರೆ. ಕಾರ್ಯಾಗಾರ ಉಪನ್ಯಾಸಕರಿಗಲ್ಲದೆ ತಾಂತ್ರಿಕ ಅಧ್ಯಾಪಕರು ಮತ್ತು ಸಂಶೋಧನಾ ವಿದ್ಯಾರ್ಥಿಗಳಿಗೂ ಮುಕ್ತವಾಗಿದ್ದು ಇದರ ಪ್ರಯೋಜನ ಪಡೆದುಕೊಳ್ಳುವಂತೆ ಕರೆ ನೀಡಿದರು.

ಮುಖ್ಯ ಅತಿಥಿಯಾಗಿ ಪಾಲ್ಗೊಂಡಿದ್ದ ವಿಎಲ್‌ಎಸ್‌ಐ ಸಿಸ್ಟಮ್ ಡಿಸೈನ್ ಸಂಸ್ಥೆಯ ಸಂಸ್ಥಾಪಕ ಸಿಇಒ ಕುನಾಲ್ ಘೋಷ್ ಮಾತನಾಡಿ, ಪ್ರಸ್ತುತ ಜಗತ್ತಿನಲ್ಲಿ ಆರ್ಥಿಕ ಬುದ್ಧಿಮತ್ತೆಯ ಉಪಯೋಗಗಳು ಹಾಗೂ ತಂತ್ರಜ್ಞಾನದಲ್ಲಿ ಅದರ ಬಳಕೆಯ ಬಗ್ಗೆ ವಿಸ್ತೃತವಾಗಿ ತಿಳಿಸಿದರು. ಕಾಲೇಜಿನ ಪ್ರಾಂಶುಪಾಲ ಡಾ। ಕೆ.ಎನ್. ಸುಬ್ರಹ್ಮಣ್ಯ, ಕಾರ್ಯಾಗಾರದ ಮುಖ್ಯ ಸಂಚಾಲಕಿ ಡಾ। ಶೈಲಶ್ರೀ ಎನ್., ಅಯಾನ್ ದತ್ತಾ ಕಾರ್ಯಾಗಾರದಲ್ಲಿ ಉಪಸ್ಥಿತರಿದ್ದರು.

BENGALURU Edition Edition
Aug 13, 2024 Page No. 04
Powered by: